ಉನ್ನತ ಶಿಕ್ಷಣ ಇಲಾಖೆ

ಬಹುಮಹಡಿಗಳ ಕಟ್ಟಡ, ಬೆಂಗಳೂರು – 560 001

ಇ-ಪ್ರಮಾಂಕ : ಇಡಿ/13/ಎಂಎಸ್/2020(ಭಾಗ-1) ದಿನಾಂಕ : 22-07-2020

ಪ್ರಕಟಣೆ - ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಕುಲಪತಿ ಹುದ್ದೆಯ ನೇಮಕಾತಿ

1. ವಿಜಯಪುರದಲ್ಲಿರುವ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಕುಲಪತಿಯ ಹುದ್ದೆಗೆ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ-2000 ಪ್ರಕರಣ 14(2) ರ ಉಪಬಂಧಗಳನುಸಾರ ನೇಮಕಾತಿ ಮಾಡಲು ಈ ಕೆಳಕಂಡ ಅಹಸ್ಯತೆಯುಳ್ಳ ಪ್ರಾಧ್ಯಾಪಕರು / ಶಿಕ್ಷಣ ತಜ್ಞರುಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

   i. ಉನ್ನತ ಮಟ್ಟದ ಆಡಳಿತ, ಶೈಕ್ಷಣಿಕ ಹಾಗೂ ಸಂಶೋಧನಾ ಸಾಮರ್ಥ್ಯ, ಪ್ರಾಮಾಣಿಕತೆ, ಸಮಗ್ರತೆ / ಋಜುತ್ವ ನೈತಿಕ ಮೌಲ್ಯಗಳನ್ನು ಹಾಗೂ ಸಾಂಸ್ಥಿಕ ಬದ್ಧತೆಯನ್ನು ಹೊಂದಿರತಕ್ಕದ್ದು.

   ii. ವಿಶ್ವವಿದ್ಯಾಲಯಗಳಲ್ಲಿ ಪ್ರಾಧ್ಯಾಪಕರಾಗಿ ಕನಿಷ್ಠ 10 ವರ್ಷಗಳ ಸೇವೆ ಸಲ್ಲಿಸಿದ ಅಥವಾ ವಿಖ್ಯಾತ ಸಂಶೋಧನಾ / ಅಥವಾ ಶೈಕ್ಷಣಿಕ ಆಡಳಿತ ಸಂಸ್ಥೆಗಳಲ್ಲಿ ಕನಿಷ್ಠ 10 ವರ್ಷಗಳು ಕಾರ್ಯನಿರ್ವಹಿಸಿದ ಅನುಭವವನ್ನು ಹಾಗೂ ನುಮಾತಾದ ಶೈಕ್ಷಣಿಕ ಅಗ್ರಗಾಮಿತ್ವವನ್ನು ಹೊಂದಿರತಕ್ಕದ್ದು.

   iii. ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಕುಲಪತಿಯು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ-2000 ರ ಪ್ರಕರಣ 14(5) ಹಾಗೂ ಪ್ರಕರಣ 14(6) ರಲ್ಲಿ ನಿಯಮಿಸಿರುವಂತೆ, 4 ವರ್ಷಗಳು ಅಥವಾ 67 ವರ್ಷಗಳ ವಯಸ್ಸಾಗುವವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಕುಲಾಧಿಪತಿಗಳ ಇಷ್ಟಪರ್ಯಂತ ಪದಧಾರಣಾವಧಿಯನ್ನು ಹೊಂದಿರುತ್ತಾರೆ. ಆದುದರಿಂದ ಕುಲಾಧಿಪತಿಗಳ ಇಷ್ಟಪರ್ಯಂತ 4 ವರ್ಷಗಳ ಪದಧಾರಣಾವಧಿಯ ಅವಕಾಶವಿರುವ ವಯೋಮಿತಿಯನ್ನು ಹೊಂದಿರತಕ್ಕದ್ದು.

2. ಸಾಧ್ಯವಾದಷ್ಟು ಮಟ್ಟಿಗೆ ಒಬ್ಬ ಮಹಿಳೆಯೇ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಕುಲಪತಿಯಾಗತಕ್ಕದ್ದೆಂದು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ-2000ರ ಪ್ರಕರಣ 14(4)ರ ಎರಡನೇ ಪರಂತುಕದಲ್ಲಿ ಉಪಬಂಧಿಸಲಾಗಿರುವ ಬಗ್ಗೆ ಈ ಮೂಲಕ ಗಮನಕ್ಕೆ ತರಲಾಗಿದೆ.

3. **ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಕುಲಪತಿ ಹುದ್ದೆಯ ನೇಮಕಾತಿಗೆ** ಉಮೇದುವಾರಿಕೆ ಸಲ್ಲಿಸಬಯಸುವ ಅಸಕ್ತರು ತಮ್ಮ ವಿದ್ಯಾರ್ಹತೆ, ಸಂಶೋಧನೆ, ಶೈಕ್ಷಣಿಕ ಮತ್ತು ಆಡಳಿತಾತ್ಮಕ ಅನುಭವಗಳು, ಸಾಧನೆಗಳು ಹಾಗೂ ಇತರೆ ವಿವರಗಳನ್ನು ಯುಜಿಸಿಯಿಂದ ನಿಗದಿಪಡಿಸಲಾಗಿರುವ ನಮೂನೆಯಲ್ಲಿ ಧರ್ತಿ ಮಾಡಿ ಮುದ್ರಿತ ಅರ್ಜಿಗಳನ್ನು ಕ್ರಿಪ್ರತಿಗಳಲ್ಲಿ ಈ ನೇಮಕಾತಿ ಜಾಹೀರಾತು ಪ್ರಕಟಣೆಯಾದ 15 ದಿನಗಳ ಒಳಗಾಗಿ ಸ್ವೀಕೃತವಾಗುವಂತೆ **"ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, 6ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು – 560 001"** ಇವರಿಗೆ ಸಲ್ಲಿಸತಕ್ಕದ್ದು.

4. ಪಿ.ಡಿ.ಎಫ್. ರೂಪದ ವಿದ್ಯುನ್ಮಾನ ಅರ್ಜಿಗಳನ್ನು ಏಕ ಪ್ರತಿಯಲ್ಲಿ **E-mail : kgsheduni2020@gmail.com** ಗೆ ಕಳುಹಿಸತಕ್ಕದ್ದು.

5. ಪ್ರಸ್ತುತ ಸೇವೆಯಲ್ಲಿರುವ ವ್ಯಕ್ತಿಗಳು ಅವರ ವಿರುದ್ಧ ಇಲಾಖಾ / ಕ್ರಿಮಿನಲ್ ವಿಚಾರಣೆಗಳು ಬಾಕಿ ಇರದ / ಹೂಡಲು ಉದ್ದೇಶಿಸಿರದ ಮತ್ತು ಈ ಹಿಂದೆ ವಿಚಾರಣೆಗಳನ್ನು ನಡೆಸಿ ದಂಡನೆ ವಿಧಿಸಲಾಗಿರದ ಬಗ್ಗೆ ಅವರು ಸೇವೆ ಸಲ್ಲಿಸುತ್ತಿರುವ ಸಂಸ್ಥೆಯ ಮುಖ್ಯಸ್ಥರಿಂದ ದೃಢೀಕರಿಸಿ ಪ್ರಮಾಣ ಪತ್ರಗಳನ್ನು ಹಾಗೂ ಸೇವೆಯಿಂದ ವಯೋನಿವೃತ್ತಿ ಹೊಂದಿರುವವರು ಈ ಕುರಿತಂತೆ ಸ್ವಯಂ ದೃಢೀಕರಣ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು. ಪ್ರಮಾಣ ಪತ್ರಗಳಲ್ಲಿ ತಪ್ಪು ಮಾಹಿತಿ ನೀಡಿರುವುದು ಕಂಡುಬಂದಲ್ಲಿ ಸಂಬಂಧಿಸಿದವರನ್ನು ಕಠಿಣ ಕ್ರಮಕ್ಕೆ ಗುರಿಪಡಿಸಲಾಗುವುದು. ಈ ರೀತಿಯಲ್ಲಿ ಪ್ರಮಾಣ ಪತ್ರಗಳನ್ನು ಸಲ್ಲಿಸದ ವ್ಯಕ್ತಿಗಳ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

6. ಅರ್ಜಿ ಸಲ್ಲಿಸಲು ನಿಗದಿಪಡಿಸಲಾಗಿರುವ ನಮೂನೆ / ಪ್ರಪತ್ರವನ್ನು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಅಧಿಕೃತ ಜಾಲತಾಣದಿಂದ ಪಡೆಯಬಹುದು.

7. ನಿಗದಿತ ಅವಧಿ / ಗಡುವು ಮುಕ್ತಾಯವಾದ ನಂತರ ಸ್ವೀಕೃತವಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅಂಚೆ ಅಥವಾ ಇತರೆ ಸ್ವರೂಪದ ವಿಳಂಬಗಳಿಗೆ ಉನ್ನತ ಶಿಕ್ಷಣ ಇಲಾಖೆಯು ಜವಾಬ್ದಾರವಾಗುವುದಿಲ್ಲ.

8. **ನೇಮಕಾತಿ ಪ್ರಕ್ರಿಯೆಯಲ್ಲಿ ಪಾಮಮಾರ್ಗದ ಮೂಲಕ ಅನುಚಿತ ಪ್ರಭಾವ ಬೀರಲು ಪ್ರಯತ್ನಿಸುವ ವ್ಯಕ್ತಿಗಳ ಅಭ್ಯರ್ಥಿತವನ್ನು ರದ್ದುಗೊಳಿಸಲಾಗುವುದು.**

ಸಹಿ/-

ಸರ್ಕಾರದ ಅಪರ ಮುಖ್ಯ ಕಾಯ